# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: | : | 216(1781) ಉತ್ತರಿಸಬೇಕಾದ ದಿನಾಂಕ:14.3.2022 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಆಯನೂರ ಮಂಜುನಾಥ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 21.03.2022 ತಡೆಹಿಡಿಯಲಾದ ಪ್ರಶ್ನೋತ್ತರ ಪಟ್ಟಿಯಲ್ಲಿ ಸೇರಿಸಲಾಗಿದೆ |
| ಉತ್ತರಿಸುವ ಸಚಿವರು | : | ಡಾ॥ ಅಶ್ವತ್ಥನಾರಾಯಣ್.ಸಿ.ಎನ್ (ಉನ್ನತ ಶಿಕ್ಷಣ) |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಎಷ್ಟು ಜನ ಪದವೀಧರರು ಇದ್ದಾರೆ; ಇವರಲ್ಲಿ ಎಷ್ಟು ಜನ ನಿರುದ್ಯೋಗಿಗಳಾಗಿದ್ದಾರೆ: ಇವರ ಉದ್ಯೋಗ ಅವಕಾಶಕ್ಕೆ ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ; (ವಿವರವಾದ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಪದವಿ ಪಡೆದ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ:-<br>2015-16 – 473186<br>2016-17 – 453204<br>2017-18 – 433987<br>2018-19 – 475533<br>2019-20 – 473186<br><br>ಪದವಿ ಶಿಕ್ಷಣದ ಬಳಿಕ ಸ್ವಯಂ ಉದ್ಯೋಗ, ವ್ಯಾಪಾರ ಮತ್ತು ಇತರ ಖಾಸಗಿ ಕ್ಷೇತ್ರಗಳಲ್ಲಿ ಪದವೀಧರರು ತಮ್ಮ ಆಸಕ್ತಿಗನುಗುಣವಾಗಿ ಉದ್ಯೋಗವನ್ನು ಕಂಡುಕೊಳ್ಳುವುದರಿಂದ ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಯಾವುದೇ ತಂತ್ರಾಂಶ ನಿರ್ವಹಣಾ ವ್ಯವಸ್ಥೆ ಇರುವುದಿಲ್ಲ.<br><br>ಆದರೆ, ಪದವೀಧರರಿಗೆ ಉದ್ಯೋಗ ಅವಕಾಶವನ್ನು ರೂಪಿಸುವ ಸಂಬಂಧ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದ ಉದ್ಯೋಗ ವಿಭಾಗದಲ್ಲಿ 48211-ಪದವೀಧರರು ಮತ್ತು 3536-ಸ್ನಾತಕೋತ್ತರ ಪದವೀಧರ ಉದ್ಯೋಗಾಕಾಂಕ್ಷಿಗಳು ನೋಂದಣಿ ಮಾಡಿಕೊಂಡಿರುತ್ತಾರೆ.<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ.<br><br><u>ವೃತ್ತಿ ಮಾರ್ಗದರ್ಶನ</u>:-ಕಛೇರಿಗೆ ಭೇಟಿ ನೀಡುವ ಉದ್ಯೋಗಾಕಾಂಕ್ಷಿಗಳಿಗೆ ಹಾಗೂ ಶಾಲಾ ಕಾಲೇಜುಗಳಲ್ಲಿ ವೃತ್ತಿ ಮಾರ್ಗದರ್ಶನ, ಸಮಾಲೋಚನೆ, ಅಲ್ಪಾವಧಿ ಕೌಶಲ್ಯ ತರಬೇತಿ ನೀಡಿ ಉದ್ಯೋಗ ಅವಕಾಶಗಳ ಪಡೆಯುವಿಕೆಯನ್ನು ಹೆಚ್ಚಿಸಲಾಗುತ್ತಿದೆ.<br><br><u>ಸ್ಟಡಿ ಸರ್ಕಲ್</u>:- ಸರ್ಕಾರಿ ವಲಯದ ಎಲ್ಲಾ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕವೇ ನೇಮಕಾತಿಯಾಗುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಉದ್ಯೋಗ ವಿನಿಮಯ ಕಛೇರಿಗಳಲ್ಲಿ ಸ್ಟಡಿ ಸರ್ಕಲ್ ಮೂಲಕ ಉಚಿತ ಪರೀಕ್ಷಾಪೂರ್ವ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. |

| | | |
|---|---|---|
| | | **ಮಾದರಿ ವೃತ್ತಿ ಕೇಂದ್ರ:**– ಕೇಂದ್ರ ಸರ್ಕಾರದ ಶೇಕಡ 100ರ ಅನುದಾನದೊಂದಿಗೆ ಆಯ್ದ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಗಳಲ್ಲಿ ಮಾದರಿ ವೃತ್ತಿ ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಉದ್ಯೋಗ ವಿನಿಮಯ ಕಛೇರಿಗಳ ಮೂಲಭೂತ ಸೌಲಭ್ಯಗಳ ಒದಗಿಸುವಿಕೆ ಮತ್ತು ಉದ್ಯೋಗ ಮೇಳಗಳನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಸೂಕ್ತ ಕ್ರಮ ವಹಿಸಲಾಗುತ್ತಿದ್ದು, ಪ್ರಸ್ತುತ ರಾಜ್ಯದಲ್ಲಿ ಮೈಸೂರು, ಹಾಸನ, ಹುಬ್ಬಳ್ಳಿ–ಧಾರವಾಡ, ಕಲಬುರಗಿ, ತುಮಕೂರು, ಕೋಲಾರ, ದಾವಣಗೆರೆ, ಬಳ್ಳಾರಿ ಹಾಗೂ ಮಂಗಳೂರು ಈ 9 ಕಛೇರಿಗಳಲ್ಲಿ ಮಾದರಿ ವೃತ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br><br>**ಉದ್ಯೋಗ ಮೇಳ:**– ಸ್ಥಳೀಯವಾಗಿ ಲಭ್ಯವಿರುವ ಕೈಗಾರಿಕೆಗಳಿಂದ ಲಭ್ಯವಿರುವ ಖಾಲಿ ಹುದ್ದೆಗಳ ಮಾಹಿತಿ ಪಡೆದು, ಜಿಲ್ಲಾ ಮಟ್ಟದಲ್ಲಿ ಮಿನಿ ಉದ್ಯೋಗ **ಮೇಳಗಳನ್ನು** ಏರ್ಪಡಿಸುವ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಒದಗಿಸಿಕೊಡಲು ಸಹಕರಿಸಲಾಗುತ್ತಿದೆ.<br><br>**<u>ಕೌಶಲ್ಯ ಮಿಷನ್:</u>**– ಕರ್ನಾಟಕ ರಾಜ್ಯದಾದ್ಯಂತ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಗಳ ಮೂಲಕ ಉಚಿತ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ರಾಜ್ಯದ ಯುವ ಜನತೆಗೆ ಕೌಶಲ್ಯತೆಯೊಂದಿಗೆ ಉದ್ಯಮಶೀಲನ್ನಾಗಿಸುವ ಮಹತ್ವಕಾಂಕ್ಷೆಯನ್ನು ಹೊಂದಿದ್ದು, ತರಬೇತುದಾರ ಸಂಸ್ಥೆಗಳಲ್ಲಿ ತರಬೇತಿ ಪಡೆಯುವ ಅಭ್ಯರ್ಥಿಗಳ ಪೈಕಿ ಶೇ 70 ರಷ್ಟು ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಷರತ್ತನ್ನು ವಿಧಿಸಲಾಗಿದೆ ಹಾಗೂ ಪ್ರಾದೇಶಿಕ, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಉದ್ಯೋಗ ಮೇಳಗಳ ಮೂಲಕ ಮತ್ತು ವರ್ಚುಯಲ್ ಉದ್ಯೋಗ ಮೇಳಗಳ ಮೂಲಕ ರಾಜ್ಯದ ಯುವ ಜನತೆಗೆ ಉದ್ಯೋಗಾವಕಾಶ ಒದಗಿಸುವ ಕ್ರಮವನ್ನು ಕೈಗೊಂಡಿದೆ.<br><br>**<u>ಕಿರು ಉದ್ಯಮಶೀಲತೆ ಕಾರ್ಯಕ್ರಮ (NEP)</u>** : ಹೆಸರೇ ಸೂಚಿಸುವಂತೆ ತಳಮಟ್ಟದ ಕಿರು ಉದ್ಯಮಿಗಳಿಗೆ ಕೌಶಲ್ಯಗಳನ್ನು ಕಲಿಯಲು ಮತ್ತು ವ್ಯವಹಾರ ಜ್ಞಾನವನ್ನು ಪಡೆಯಲು ಸಹಾಯ ಮಾಡುವ ಉದ್ಯಮಶೀಲತೆಯ ಕಾರ್ಯಕ್ರಮವಾಗಿದ್ದು, 200 ತಳ ಮಟ್ಟದ ಕಿರು ಉದ್ಯಮಿಗಳನ್ನು ಪ್ರೋತ್ಸಾಹಿಸುವ ಹಾಗೂ ಮಹಿಳೆಯರಿಗೆ ವಿಶೇಷ ಗಮನವನ್ನು ನೀಡುವ ಮೂಲಕ ತರಬೇತಿ ಮತ್ತು ಸೌಲಭ್ಯ ವನ್ನು ಒದಗಿಸುವ ಮೂಲಕ ಉದ್ಯಮಶೀಲತೆಯ ಪ್ರತಿಯೊಂದು ಹಂತದಲ್ಲೂ ಇರುವ ಹಲವಾರು ಸವಾಲುಗಳನ್ನು ಎದುರಿಸಲು ಸಹಾಯ ಮಾಡುವುದಾಗಿದೆ. |

<table>
<tr><td></td><td></td><td>

<u>ಅಂತರ್‌ರಾಷ್ಟ್ರೀಯ ವಲಸಿಗರ ಕೇಂದ್ರ–ಕರ್ನಾಟಕ(IMCK)</u>:– ವಿದೇಶಗಳಲ್ಲಿ ಉದ್ಯೋಗ ಮತ್ತು ಜೀವನೋಪಾಯವನ್ನು ಹೊಂದಲು ಹಾಗು ಕರ್ನಾಟಕವನ್ನು ವಿದೇಶಿ ಉದ್ಯೋಗಕ್ಕೆ ಅದ್ಯತಾ ರಾಜ್ಯವನ್ನಾಗಿ ರೂಪಿಸಲು ರಾಜ್ಯದ ಯುವ ಜನತೆಗೆ ಅಗತ್ಯ ತರಬೇತಿ ಮತ್ತು ಪ್ರೋತ್ಸಾಹವನ್ನು ನೀಡಲಾಗುತ್ತಿದೆ.

<u>ಡೇ–ನಲ್ಮ್:–</u> ಡೇ–ನಲ್ಮ್ ಅಭಿಯಾನದ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳನಿಯುಕ್ತಿ ಉಪಘಟಕದಡಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಸದರಿ ಉಪಘಟಕದಡಿ ನಗರದ ನಿರುದ್ಯೋಗ ಯುವಕ/ಯುವತಿಯರಿಗೆ ವಿವಿಧ ಉದ್ಯೋಗಾಧಾರಿತ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನೀಡಿ, ಪ್ರಮಾಣಿಕರಣ ಮತ್ತು ಮೌಲ್ಯಮಾಪನವನ್ನು ಕೈಗೊಂಡು, ಕೇಂದ್ರ ಸರ್ಕಾರದ ಪ್ರಮಾಣ ಪತ್ರವನ್ನು ನೀಡಿ, ತರಬೇತಿಯನ್ನು ಪಡೆದುಕೊಂಡು ಶೇ.70ರಷ್ಟು ಅಭ್ಯರ್ಥಿಗಳಿಗೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುತ್ತಿದೆ.

<u>**ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM)**</u> **ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ** ಗ್ರಾಮಾಂತರ ಪ್ರದೇಶದಲ್ಲಿನ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ವಿಷಯಗಳಡಿ ತರಬೇತಿಗಳನ್ನು ನೀಡಿ ಉದ್ಯೋಗ ಕಲ್ಪಿಸಲಾಗುತ್ತಿದೆ. ಉದ್ಯೋಗ ಮೇಳಗಳನ್ನು ಹಮ್ಮಿಕೊಳ್ಳುವ ಮೂಲಕ ಉದ್ಯೋಗ ಅವಕಾಶ ಕಲ್ಪಿಸಲಾಗುತ್ತಿದೆ.

**ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಕೇಂದ್ರಗಳಡಿ** ವಿವಿಧ 61 ಟ್ರೇಡ್‌ಗಳಲ್ಲಿ ತರಬೇತಿ ನೀಡಿ ರಾಜ್ಯದ ಒಟ್ಟು 33 ಕೇಂದ್ರಗಳಲ್ಲಿ ಗ್ರಾಮೀಣ ಪ್ರದೇಶದ ಯುವಕ ಯುವತಿಯರಿಗೆ ಸ್ವಯಂ ಉದ್ಯೋಗ ಒದಗಿಸಲಾಗುತ್ತಿದೆ

</td></tr>
<tr><td>(ಆ)</td><td>ಉನ್ನತ ವ್ಯಾಸಂಗಕ್ಕಾಗಿ ಶೈಕ್ಷಣಿಕ ಸಾಲವನ್ನು ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಯಾವ ಯಾವ ಸಂಸ್ಥೆಗಳಿಂದ (ಬ್ಯಾಂಕ್ ಸರ್ಕಾರದ ಇಲಾಖೆ) ಶೈಕ್ಷಣಿಕ ಸಾಲವನ್ನು ಪಡೆಯಲಾಗಿದೆ; ಪಡೆಯಲಾದ ಸಾಲದ ಒಟ್ಟು ಮೊತ್ತ ಎಷ್ಟು;</td><td>

ದಿನಾಂಕ:31-12-2021ರ ಅಂತ್ಯಕ್ಕೆ ಉನ್ನತ ವ್ಯಾಸಂಗಕ್ಕಾಗಿ ರಾಜ್ಯದಲ್ಲಿನ ಸಾರ್ವಜನಿಕ ವಲಯ ಬ್ಯಾಂಕ್‌ಗಳು, ಖಾಸಗಿ ಬ್ಯಾಂಕ್‌ಗಳು, ಗ್ರಾಮೀಣ ಬ್ಯಾಂಕುಗಳು ಹಾಗೂ ಸಹಕಾರ ಬ್ಯಾಂಕುಗಳಲ್ಲಿ ಒಟ್ಟು 210437 ವಿದ್ಯಾರ್ಥಿಗಳು ಈ ಕೆಳಕಂಡಂತೆ ರೂ.7964.98 ಕೋಟಿ ಶೈಕ್ಷಣಿಕ ಸಾಲವನ್ನು ಪಡೆದಿರುತ್ತಾರೆ.

<table>
<tr><th>Sector</th><th>No. of A/Cs as at the end of quarter (Accounts outstanding as on 31.12.2021)</th><th>Amout Outstanding (as on 31.12.2021) (Rs. In crore)</th></tr>
<tr><td>PSBs</td><td>180228</td><td>6963.12</td></tr>
<tr><td>Private Banks</td><td>9944</td><td>508.30</td></tr>
<tr><td>RRBs</td><td>19986</td><td>484.29</td></tr>
<tr><td>Cooperative Banks</td><td>279</td><td>9.27</td></tr>
<tr><td>Total</td><td>210437</td><td>7964.98</td></tr>
</table>

ಸರ್ಕಾರದ ಯಾವುದೇ ಶೈಕ್ಷಣಿಕ ಸಾಲ ನೀಡುವ ಯಾವುದೇ ಯೋಜನೆಗಳು ಪ್ರಸ್ತುತ ಜಾರಿಯಲ್ಲಿರುವುದಿಲ್ಲ.

</td></tr>
</table>

| | | |
|---|---|---|
| (ಇ) | ಶೈಕ್ಷಣಿಕ ಸಾಲ ಪಡೆದು ಉನ್ನತ ಶಿಕ್ಷಣ ಪೂರೈಸಿ ಉದ್ಯೋಗ ದೊರೆಯದೆ ನಿರುದ್ಯೋಗಿಗಳಾಗಿರುವ ಪದವೀಧರರ ಸಾಲ ಮನ್ನಾ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಸರ್ಕಾರ ಮುಂದೆ ಯಾವುದೇ ಪ್ರಸ್ತಾವನೆಯು ಇರುವುದಿಲ್ಲ. |

ಇಡಿ 02 ಅಅವಿ 2022

(ಡಾ॥ ಅಶ್ವತ್ಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ–ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಆಯನೂರ ಮಂಜುನಾಥ (ಪದವೀಧರರ ಕ್ಷೇತ್ರ), ಇವರ ಚುಕ್ಕೆ ಗುರುತಿನ ಪ್ರ.ಸಂ. 216(1781) ಕ್ಕೆ ಸಂಬಂಧಿಸಿದಂತೆ ಪೂರಕ ಟಿಪ್ಪಣಿ.

ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಪದವಿ ಪಡೆದ ವಿದ್ಯಾರ್ಥಿಗಳ ವಿವರ ಕೆಳಕಂಡಂತಿದೆ:-

| | | |
|---|---|---|
| 2015-16 | - | 473186 |
| 2016-17 | - | 453204 |
| 2017-18 | - | 433987 |
| 2018-19 | - | 475533 |
| 2019-20 | - | 473186 |

ಪದವಿ ಶಿಕ್ಷಣದ ಬಳಿಕ ಸ್ವಯಂ ಉದ್ಯೋಗ, ವ್ಯಾಪಾರ ಮತ್ತು ಇತರ ಖಾಸಗಿ ಕ್ಷೇತ್ರಗಳಲ್ಲಿ ಪದವೀಧರರು ತಮ್ಮ ಆಸಕ್ತಿಗನುಗುಣವಾಗಿ ಉದ್ಯೋಗವನ್ನು ಕಂಡುಕೊಳ್ಳುವುದರಿಂದ ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆಯಲ್ಲಿ ಯಾವುದೇ ತಂತ್ರಾಂಶ ನಿರ್ವಹಣಾ ವ್ಯವಸ್ಥೆ ಇರುವುದಿಲ್ಲ.

ಆದರೆ, ಪದವೀಧರರಿಗೆ ಉದ್ಯೋಗ ಅವಕಾಶವನ್ನು ರೂಪಿಸುವ ಸಂಬಂಧ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಆಯುಕ್ತಾಲಯದ ಉದ್ಯೋಗ ವಿಭಾಗದಲ್ಲಿ 48211-ಪದವೀಧರರು ಮತ್ತು 3536-ಸ್ನಾತಕೋತ್ತರ ಪದವೀಧರ ಉದ್ಯೋಗಾಕಾಂಕ್ಷಿಗಳು ನೋಂದಣಿ ಮಾಡಿಕೊಂಡಿರುತ್ತಾರೆ.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಲು ಕೆಳಕಂಡ ಯೋಜನೆಗಳನ್ನು ರೂಪಿಸಲಾಗಿದೆ:-

1. ವೃತ್ತಿ ಮಾರ್ಗದರ್ಶನ
2. ಸ್ಟಡಿ ಸರ್ಕಲ್
3. ಮಾದರಿ ವೃತ್ತಿ ಕೇಂದ್ರ
4. ಮಾದರಿ ವೃತ್ತಿ ಕೇಂದ್ರ
5. ಉದ್ಯೋಗ ಮೇಳ
6. ಕೌಶಲ್ಯ ಮಿಷನ್
7. ಕಿರು ಉದ್ಯಮಶೀಲತೆ ಕಾರ್ಯಕ್ರಮ (NEP)
8. ಅಂತರ್‌ರಾಷ್ಟ್ರೀಯ ವಲಸಿಗರ ಕೇಂದ್ರ-ಕರ್ನಾಟಕ(IMCK)
9. ಡೇ-ನಲ್ಮ್:-

10. ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM)

ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ಗ್ರಾಮಾಂತರ ಪ್ರದೇಶದಲ್ಲಿನ ನಿರುದ್ಯೋಗಿ ಯುವಕ/ಯುವತಿಯರಿಗೆ ವಿವಿಧ ವಿಷಯಗಳಡಿ ತರಬೇತಿಗಳನ್ನು ನೀಡಿ ಉದ್ಯೋಗ ಕಲ್ಪಿಸಲಾಗುತ್ತಿದೆ. ಉದ್ಯೋಗ ಮೇಳಗಳನ್ನು ಹಮ್ಮಿಕೊಳ್ಳುವ ಮೂಲಕ ಉದ್ಯೋಗ ಅವಕಾಶ ಕಲ್ಪಿಸಲಾಗುತ್ತಿದೆ.

11. ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಕೇಂದ್ರಗಳಡಿ ವಿವಿಧ 61 ಟ್ರೇಡ್‌ಗಳಲ್ಲಿ ತರಬೇತಿ ನೀಡಿ ರಾಜ್ಯದ ಒಟ್ಟು 33 ಕೇಂದ್ರಗಳಲ್ಲಿ ಗ್ರಾಮೀಣ ಪ್ರದೇಶದ ಯುವಕ ಯುವತಿಯರಿಗೆ ಸ್ವಯಂ ಉದ್ಯೋಗ ಒದಗಿಸಲಾಗುತ್ತಿದೆ

ಉನ್ನತ ವ್ಯಾಸಂಗಕ್ಕಾಗಿ ರಾಜ್ಯದಲ್ಲಿನ ಸಾರ್ವಜನಿಕ ವಲಯ ಬ್ಯಾಂಕ್‌ಗಳು, ಖಾಸಗಿ ಬ್ಯಾಂಕ್‌ಗಳು, ಗ್ರಾಮೀಣ ಬ್ಯಾಂಕುಗಳು ಹಾಗೂ ಸಹಕಾರಿ ಬ್ಯಾಂಕುಗಳಲ್ಲಿ ಒಟ್ಟು 210437 ವಿದ್ಯಾರ್ಥಿಗಳು ರೂ.7964.98 ಕೋಟಿ ಶೈಕ್ಷಣಿಕ ಸಾಲ ಪಡೆದಿರುತ್ತಾರೆ. ಶೈಕ್ಷಣಿಕ ಸಾಲ ಪಡೆದು ಉನ್ನತ ಶಿಕ್ಷಣ ಪೂರೈಸಿ ಉದ್ಯೋಗ ದೊರೆಯದೆ ನಿರುದ್ಯೋಗಿಗಳಾಗಿರುವ ಪದವೀಧರರ ಸಾಲ ಮನ್ನಾ ಮಾಡುವ ಯಾವುದೇ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

* * *